# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **120**

ಸದಸ್ಯರ ಹೆಸರು : **ಶ್ರೀ. ಕೇಶವ ಪ್ರಸಾದ್ ಎಸ್ (ವಿಧಾನ ಸಭಾ ಕ್ಷೇತ್ರ)**

ಉತ್ತರಿಸುವ ದಿನಾಂಕ : **27/01/2026**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ವಿಜಯಪುರ ಜಿಲ್ಲೆಯ ದೇವರ ಹಿಪ್ಪರಗಿ ತಾಲ್ಲೂಕಿನ ಜಾಲವಾದ ಗ್ರಾಮ ಪಂಚಾಯಿತಿಯನ್ನು "ಪಟ್ಟಣ ಪಂಚಾಯತ್" ಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಇದ್ದರೆ ಯಾವ ಕಾಲಮಿತಿಯಲ್ಲಿ ಮಾಡಲಾಗುವುದು? | ಜಾಲವಾದ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |
| ಆ | ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು (ಸಂಪೂರ್ಣ ಮಾಹಿತಿ ನೀಡುವುದು); | ಪಟ್ಟಣ ಪಂಚಾಯಿತಿಯನ್ನು ರಚಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್-349 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>2011 ರ ಜನಗಣತಿಯನ್ವಯ- |
| ಇ | ಜಾಲವಾದ ಗ್ರಾಮದಲ್ಲಿ ಪ್ರಸ್ತುತವಿರುವ ಜನಸಂಖ್ಯೆ ಎಷ್ಟು (ಗಂಡು-ಹೆಣ್ಣು ಪ್ರತ್ಯೇಕವಾಗಿ ಮಾಹಿತಿ ನೀಡುವುದು)? | 1. ಅಂತಹ ಪ್ರದೇಶದ ಜನಸಂಖ್ಯೆ 10,000 ಕ್ಕಿಂತ ಕಡಿಮೆ ಇಲ್ಲದ ಮತ್ತು 20,000 ಕ್ಕಿಂತ ಹೆಚ್ಚಿಲ್ಲದ ಹೊರತು;<br>2. ಅಂತಹ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋ ಮೀಟರ್ ಪ್ರದೇಶಕ್ಕೆ 400 ನಿವಾಸಿಗಳಿಗಿಂತ ಕಡಿಮೆ ಇಲ್ಲದ ಹೊರತು;<br>3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡವಾರು ಒಟ್ಟು ಉದ್ಯೋಗದ ಶೇ.50ಕ್ಕಿಂತ ಕಡಿಮೆ ಇಲ್ಲದ ಹೊರತು;<br>• ಮೇಲ್ದರ್ಜೆಗೇರಿಸಲಾಗುವ ಪ್ರದೇಶವು ತಾಲೂಕು ಕೇಂದ್ರವಾಗಿದ್ದಲ್ಲಿ ಅಲ್ಲಿನ ಜನಸಂಖ್ಯೆ 10,000 ಕ್ಕಿಂತ ಕಡಿಮೆ ಇದ್ದರೂ ಸಹ ಪರಿಗಣಿಸಬಹುದಾಗಿದೆ. |

| | | |
|---|---|---|
| | | ಈ ಮಾನದಂಡವನ್ನು ಪೂರೈಸುವಂತಹ ಜನಸಂಖ್ಯೆ ಮತ್ತು ವಿಸ್ತಾರವನ್ನುಳ್ಳ ಜಾಲವಾದ ಗ್ರಾಮದ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿ, ವಿಜಯಪುರ ಜಿಲ್ಲೆ ರವರು ಸಲ್ಲಿಸುವ ದಾಖಲೆಗಳನ್ವಯ ಪೌರಾಡಳಿತ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಲು ಅವಕಾಶವಾಗುತ್ತದೆ. ಆದರೆ, ಪ್ರಸ್ತುತ ನಗರ ಸ್ಥಳೀಯ ಸಂಸ್ಥೆಗಳನ್ನು ರಚಿಸುವ ಕಾಲಾವಕಾಶವು ದಿನಾಂಕ:31/12/2025 ರಂದು ಮುಕ್ತಾಯಗೊಂಡಿರುತ್ತದೆ. |

**ಸಂಖ್ಯೆ:ನಅಇ 04 ಎಲ್‌ಸಿಕ್ಯೂ 2026**

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು